**<u>ದಿನಾಂಕ 17.08.2023 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ :ಅರ್ಜಿದಾರರ ಪರ ವಕೀಲರಿಂದ :</u>**

ನಾನು ನನ್ನ ಮುಖ್ಯ ವಿಚಾರಣಾ ಬಾಬ್ತು ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿದ ವಿಚಾರಗಳೆಲ್ಲವೂ ಸತ್ಯವಾಗಿದ್ದು, ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ.

ನಾನು ನನ್ನ ಪರ ಸಾಕ್ಷಿಯಾಗಿ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿದ್ದೇನೆ.

ಪ್ರಥಮ ವರ್ತಮಾನ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದೂರಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಸ್ಥಳ ಮಹಜರನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು, ಮಾಲುಪಟ್ಟಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ವಾಹನ ತಪಾಸಣಾ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು,ಗಾಯದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಎಂ.ಎಲ್.ಸಿ. ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ದೋಷಾರೋಪಣಾ ಪಟ್ಟಿಯ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಸಮಯಾವಕಾಶ ಕೋರಿದ್ದರಿಂದ ಮುಂದುವರೆದ ಮುಖ್ಯವಿಚಾರಣೆಯನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ ಹೇ ಕೇ ಸ ಒ

**(ಶುಭಾ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**